**ದಿನಾಂಕಃ 26-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ವಾದಿ ಪರ ಶ್ರೀ. ಹೆಚ್ ಎಸ್ ಹೆಚ್ ವಕೀಲರಿಂದಃ-**

1ನೇ ಪ್ರತಿವಾದಿ ನನಗೆ ನನ್ನ ಅಕ್ಕನ ಗಂಡ, ನನಗೆ ಮಾವ ಆಗಬೇಕು. ವಾದಿಯರು ಪ್ರತಿವಾದಿಯ ವಿರುದ್ದ ಏನು ಬೇಡಿ ದಾವೆ ಮಾಡಿರುತ್ತಾರೆ ಎಂದು ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿ ತಿಳಿದುಕೊಂಡಿದ್ದೇನೆ ಎನ್ನುತ್ತಾರೆ. ತಾವು ನಿಪಿ-1 ಕ್ರಯಕರಾರು ಪತ್ರಕ್ಕೆ ಸಾಕ್ಷಿದಾರರೆಂದು ಸಹಿ ಮಾಡಿದ್ದೀರಾ ಎಂದರೆ ಇಲ್ಲ ಎನ್ನುತ್ತಾರೆ. ಪ್ರಮಾಣ ಪತ್ರದಲ್ಲಿ ಇರುವ ವಿಷಯಗಳನ್ನು ಯಾರು ಹೇಳಿ ಬರೆಸಿರುತ್ತಾರೆ ಎಂದರೆ ಸಾಕ್ಷಿ ನಾನೇ ಹೇಳಿ ಬರೆಸಿರುತ್ತೇನೆ ಎನ್ನುತ್ತಾರೆ. ಪ್ರತಿವಾದಿಯರು ನನ್ನ ಸಂಬಂಧಿಕರಿದ್ದು ಅವರಿಗೆ ಸಹಾಯ ಮಾಡಲು ನಾನು ಕ್ರಯ ಕರಾರು ಪತ್ರಕ್ಕೆ ಸಾಕ್ಷಿದಾರನಾಗಿ ಸಹಿ ಮಾಡದೇ ಇದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ವಾದಿಯರು ಮತ್ತು ಪ್ರತಿವಾದಿಯರ ನಡುವೆ ಆದ ವ್ಯವಹಾರ ಗೊತ್ತಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ
ನ್ಯಾಯಾಲಯ, ಚನ್ನಪಟ್ಟಣ